Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

01.04.2026 18.40 hrs

***************

ಮುಖ್ಯಾಂಶಗಳು

- ವಿಧಾನಸಭೆ ಉಪಚುನಾವಣೆ-ದಾವಣಗೆರೆ ದಕ್ಷಿಣ, ಬಾಗಲಕೋಟೆಯಲ್ಲಿ ಅಭ್ಯರ್ಥಿಗಳ ಪರ ರಾಜಕೀಯ ಮುಖಂಡರಿಂದ ಬಿರುಸಿನ ಪ್ರಚಾರ
- ಎಸ್‌ಟಿಆರ್‌ಆರ್ ಯೋಜನೆಗೆ ಭೂಸ್ವಾಧೀನ-ರೈತರಿಗೆ ಶೀಘ್ರ ಪರಿಹಾರ ನೀಡುವಂತೆ ಸಂಸದ ಡಾ.ಮಂಜುನಾಥ್ ಕೇಂದ್ರ ಗೃಹ ಸಚಿವರಿಗೆ ಮನವಿ
- ಕಡತ ವಿಲೇವಾರಿಯಲ್ಲಿ ಶೇಕಡ ೧೦೦ರಷ್ಟು ಗುರಿ ಸಾಧಿಸಿದ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಕಚೇರಿ
- ವಿಶ್ವವಿಖ್ಯಾತ ಕರಗ ಶಕ್ತ್ಯೋತ್ಸವಕ್ಕೆ ಕ್ಷಣಗಣನೆ ; ಬೆಂಗಳೂರಿನಲ್ಲಿ ಬಿಗಿ ಭದ್ರತೆ
- ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟ ; ೨೧ ಚಿನ್ನದ ಪದಕದೊಂದಿಗೆ ಅಗ್ರಸ್ಥಾನ ಕಾಯ್ದುಕೊಂಡ ಕರ್ನಾಟಕ

***************

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ರಾಜಕೀಯ ಪಕ್ಷಗಳಿಂದ ಉಪಚುನಾವಣೆ ಪ್ರಚಾರ ಬಿರುಸುಗೊಂಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಪ್ರಚಾರ ಕಾರ್ಯದಲ್ಲಿ ಪಾಲ್ಗೊಂಡು ತುರ್ಚಘಟ್ಟ ಗ್ರಾಮದಲ್ಲಿ ರೋಡ್ ಶೋ ನಡೆಸಿದರು. ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಅವರನ್ನು ಗೆಲ್ಲಿಸುವಂತೆ ಮನವಿ ಮಾಡಿದರು.

ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ ಸತತ ಎರಡನೇ ದಿನವೂ ಪ್ರಚಾರ ನಡೆಸಿದರು.

ಬಳಿಕ ಮಾತನಾಡಿದ ಬಸವರಾಜ್ ಬೊಮ್ಮಾಯಿ, ಈ ಬಾರಿ ಬಿಜೆಪಿ ಅಭ್ಯರ್ಥಿಗೆ ಮತ ನೀಡುವಂತೆ ಮನವಿ ಮಾಡಿದ್ದಾರೆ. ಉಪಚುನಾವಣೆ ಫಲಿತಾಂಶದ ಬಳಿಕ ಮೇ ತಿಂಗಳಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಅಧಿಕಾರಕ್ಕಾಗಿ ಕಚ್ಚಾಟ ನಡೆಯಲಿದೆ ಎಂದು ಭವಿಷ್ಯ ನುಡಿದಿದ್ದಾರೆ.

***************

ಬಾಗಲಕೋಟೆಯಲ್ಲಿ ಉಪಚುನಾವಣೆ ಪ್ರಚಾರ ಬಿರುಸುಗೊಂಡಿದೆ. ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಬಿರುಸಿನ ಪ್ರಚಾರ ನಡೆಸಿದರು.

ಈ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸರ್ಕಾರ ೧೫ನೇ ಹಣಕಾಸು ಆಯೋಗದ ಶಿಫಾರಸ್ಸುಗಳ ಪ್ರಕಾರ ರಾಜ್ಯಕ್ಕೆ ನೀಡಬೇಕಾದ ಅನುದಾನವನ್ನು ಪೂರ್ಣವಾಗಿ ನೀಡಿಲ್ಲ ಎಂದು ಆರೋಪಿಸಿದರು.

ವಿದ್ಯಾರ್ಥಿಗಳು ಮತದಾನದ ಹಕ್ಕನ್ನು ಸಮಪರ್ಕವಾಗಿ ಬಳಸಿಕೊಳ್ಳುವಂತೆ ಕರೆ ನೀಡಿದರು.

ಇನ್ನೊಂದೆಡೆ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿ ಮಠ ಪರ ಬಿಜೆಪಿ ನಾಯಕರು ಬಿರುಸಿನ ಪ್ರಚಾರ ನಡೆಸಿದರು. ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದ್ದು, ನೈಜ ಚಿತ್ರಣವನ್ನು ಜನತೆಗೆ ತಿಳಿಸಲು ಸರ್ಕಾರ ಸಿದ್ಧವಿಲ್ಲ ಎಂದು ಆರೋಪಿಸಿದ್ದಾರೆ.

***************

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್.ಮಂಜುನಾಥ್ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ, ತಮ್ಮ ಕ್ಷೇತ್ರ ವ್ಯಾಪ್ತಿಯ ಪ್ರಮುಖ ಮೂಲಸೌಕರ್ಯ ಯೋಜನೆಯಾದ ಸ್ಯಾಟಲೈಟ್ ಟೌನ್ ರಿಂಗ್ ರೋಡ್- ಎಸ್‌ಟಿಆರ್‌ಆರ್ ಯೋಜನೆಗಾಗಿ ಭೂಸ್ವಾಧೀನಗೊಂಡಿರುವ ರೈತರಿಗೆ ಬಹುಕಾಲದಿಂದ ಬಾಕಿಯಿರುವ ಪರಿಹಾರವನ್ನು ಶೀಘ್ರದಲ್ಲಿ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದಾರೆ.

ಈ ಯೋಜನೆಗಾಗಿ ರೈತರಿಂದ ಭೂಸ್ವಾಧೀನ ಪಡಿಸಿಕೊಂಡು ಹಲವು ವರ್ಷಗಳು ಕಳೆದಿದ್ದರೂ, ಅವರಿಗೆ ಇನ್ನೂ ಸಮರ್ಪಕ ಪರಿಹಾರ ಸಿಗದೆ ಇರುವುದರಿಂದ ಅನೇಕ ಕುಟುಂಬಗಳು ಗಂಭೀರ ಆರ್ಥಿಕ ಸಂಕಷ್ಟ ಎದುರಿಸುತ್ತಿವೆ. ಈ ಹಿನ್ನಲೆಯಲ್ಲಿ ತುರ್ತು ಕ್ರಮವಾಗಿ ಬಾಕಿ ಇರುವ ಪರಿಹಾರ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದಾರೆ.

***************

ಕೃಷಿ ಸಚಿವ ಎನ್.ಚಲುವರಾಯಸ್ವಾಮಿಯವರ ಕಚೇರಿಯೂ ಸಾರ್ವಜನಿಕ ಸ್ನೇಹಿ ಆಡಳಿತವನ್ನು ಅಳವಡಿಸಿಕೊಂಡ ಹಿನ್ನಲೆಯಲ್ಲಿ ಈ ವರ್ಷವೂ ಕಡತ ವಿಲೇವಾರಿಯಲ್ಲಿ ಶೇಕಡ ೧೦೦ ರಷ್ಟು ಸಾಧನೆ ಮಾಡಿದೆ.

ವಿಕಾಸಸೌಧದಲ್ಲಿರುವ ಕೃಷಿ ಸಚಿವರ ಕಛೇರಿಗೆ ಆಗಮಿಸಿದ ಸಾರ್ವಜನಿಕರಿಗೆ ವೇಗವಾದ ಮತ್ತು ಪರಿಣಾಮಕಾರಿ ಸೇವೆಗಳನ್ನು ಒದಗಿಸುವ ದೃಷ್ಟಿಯಿಂದ ಕೃಷಿ ಸಚಿವರ ಸಿಬ್ಬಂದಿ ವಿಶೇಷ ಕಾಳಜಿಯಿಂದ ಎಲ್ಲಾ ಬಾಕಿ ಕಡತಗಳನ್ನು ಸಮಗ್ರವಾಗಿ ಪರಿಶೀಲಿಸಿ ಸಮಯಬದ್ಧವಾಗಿ ವಿಲೇವಾರಿ ಮಾಡಿದ್ದಾರೆ.

ವಿಧಾನಸಭೆ ಹಾಗೂ ವಿಧಾನಪರಿಷತ್‌ನ ಸದಸ್ಯರು ಒಟ್ಟು ೩೫೨ ಪ್ರಶ್ನೆಗಳನ್ನು ಕೃಷಿ ಇಲಾಖೆಗೆ ಕೇಳಿದ್ದು, ಎಲ್ಲಾ ಪ್ರಶ್ನೆಗಳಿಗೂ ಉತ್ತರ ನೀಡಲಾಗಿದೆ.

ಕಳೆದ ಮೂರು ವರ್ಷಗಳಿಂದ ಕೃಷಿ ಸಚಿವರ ಕಛೇರಿಯಲ್ಲಿ ಶೇಕಡ ೧೦೦ರಷ್ಟು ಕಡತ ವಿಲೇವಾರಿ ಸಾಧನೆ ಮಾಡುತ್ತಾ ಬರಲಾಗಿದೆ.

ಈ ಸಾಧನೆಗೆ ಸಹಕರಿಸಿದ ಸಚಿವರ ಕಚೇರಿಯ ಆಪ್ತ ಕಾರ್ಯದರ್ಶಿ ಹಾಗೂ ಕೃಷಿ ಇಲಾಖೆಯ ಎಲ್ಲಾ ಸಿಬ್ಬಂದಿ ಬಗ್ಗೆ ಕೃಷಿ ಸಚಿವ ಚಲುವರಾಯಸ್ವಾಮಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

***************

ಇದೇ ಮೊದಲ ಬಾರಿಗೆ ಸಂಪೂರ್ಣ ಡಿಜಿಟಲ್ ಜನಗಣತಿಗೆ ದೇಶಾದ್ಯಂತ ಚಾಲನೆ ದೊರೆತಿದೆ. ಇದು ದೇಶದ ೧೬ನೇ ರಾಷ್ಟ್ರೀಯ ಜನಗಣತಿಯಾಗಿದ್ದು, ಸ್ವಾತಂತ್ರ್ಯಾನಂತರದ ೮ನೇ ಜನಗಣತಿಯಾಗಿದೆ. ಸಾಂಪ್ರದಾಯಿಕ ಕಾಗದ - ಪೆನ್ನು ಪದ್ಧತಿ ಕೈಬಿಟ್ಟು, ಮೊಬೈಲ್ ಆಪ್ ಮತ್ತು ವೆಬ್ ಪೋರ್ಟಲ್ ಮೂಲಕ ಮಾಹಿತಿ ಸಂಗ್ರಹಿಸಲಾಗುತ್ತಿದೆ.

ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅವರು, ತಮ್ಮ ಮೊಬೈಲ್ ಮೂಲಕ ಸ್ವಯಂ ಗಣತಿ ದಾಖಲಾತಿ ಪೂರ್ಣಗೊಳಿಸಿದರು. ಬಳಿಕ ಮಾತನಾಡಿದ ಅವರು, ಜನಗಣತಿ-೨೦೨೭ ಅನ್ನು ಯಶಸ್ವಿಗೊಳಿಸುವಂತೆ ಕರೆ ನೀಡಿದರು.

ಧ್ವನಿ : ಶಾಲಿನಿ ರಜನೀಶ್

ಕೇಂದ್ರ ಸರ್ಕಾರ ಕೈಗೊಂಡಿರುವ ೨೦೨೭ರ ಜನಗಣತಿ ಹಿನ್ನೆಲೆಯಲ್ಲಿ ಏಪ್ರಿಲ್ ತಿಂಗಳಿನಲ್ಲಿ ನಡೆಯಲಿರುವ ಮನೆಗಣತಿಗೆ ಎಲ್ಲರೂ ಪೂರಕ ಸಹಕಾರ ನೀಡಬೇಕು ಎಂದು ಹಾಸನ ಶಾಸಕ ಸ್ವರೂಪ್ ಪ್ರಕಾಶ್ ಮನವಿ ಮಾಡಿದ್ದಾರೆ.

ದೇಶದ ಅಭಿವೃದ್ಧಿಗೆ ಮಹತ್ವದ ಆಧಾರವಾಗಿರುವ ಜನಗಣತಿ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ನಾಗರಿಕರು ಸಕ್ರಿಯವಾಗಿ ಭಾಗವಹಿಸಬೇಕು ಹಾಗೂ ಅಧಿಕಾರಿಗಳು ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸೂಚನೆ ನೀಡಿದ್ದಾರೆ.

***************

ವಿಶ್ವವಿಖ್ಯಾತ ಬೆಂಗಳೂರಿನ ಕರಗ ಶಕ್ತ್ಯೋತ್ಸವಕ್ಕೆ ಕ್ಷಣಗಣನೆ ಆರಂಭವಾಗಿದೆ. ಇಂದು ಮಧ್ಯರಾತ್ರಿ ಹೂವಿನ ಕರಗ ನಡೆಯಲಿದ್ದು, ಈ ಬಾರಿಯೂ ಅರ್ಚಕ ಜ್ಞಾನೇಂದ್ರ ಕರಗ ಹೊರಲಿದ್ದಾರೆ. ಕರಗವು ಒಟಿಸಿ ರಸ್ತೆ, ಅವೆನ್ಯೂ ರಸ್ತೆ, ಮಾರ್ಕೆಟ್ ರಸ್ತೆ, ಮಸ್ತಾನ್ ಸಾಬ್ ದರ್ಗ, ಅಣ್ಣಮ್ಮ ದೇವಾಲಯ, ತಿಗಳರಪೇಟೆ ಮತ್ತಿತರ ಪ್ರದೇಶಗಳಲ್ಲಿ ಸಂಚರಿಸಲಿದೆ.

ಲಕ್ಷಾಂತರ ಭಕ್ತರು ಸೇರುವ ನಿರೀಕ್ಷೆಯಿರುವುದರಿಂದ ದೇವಸ್ಥಾನದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ.

***************

ಬೆಂಗಳೂರು ಕೆ.ಆರ್.ಮಾರುಕಟ್ಟೆ ಸಮಗ್ರ ಅಭಿವೃದ್ಧಿಗಾಗಿ ಕ್ರಿಯಾಯೋಜನೆ ರೂಪಿಸುವುದರ ಜೊತೆಗೆ ಕಾಮಗಾರಿಗಳನ್ನು ಪೂರ್ಣಗೊಳಿಸುವ ವೇಳಾಪಟ್ಟಿ ಸಿದ್ಧಪಡಿಸಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕೆ.ಆರ್. ಮಾರುಕಟ್ಟೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಮಾತನಾಡಿದ ಅವರು, ಸಮರ್ಪಕ ತ್ಯಾಜ್ಯ ವಿಲೇವಾರಿ, ಸಿಸಿ-ಕ್ಯಾಮೆರಾಗಳ ಅಳವಡಿಕೆ, ಹೂವಿನ ಮಾರುಕಟ್ಟೆಗೆ ಸಮರ್ಪಕ ಸಂಪರ್ಕ ಕಲ್ಪಿಸುವುದು ಸೇರಿದಂತೆ ಇತರೆ ಅಭಿವೃದ್ಧಿ ಕಾರ್ಯಗಳ ಕುರಿತು ಸಮಗ್ರ ಕ್ರಿಯಾಯೋಜನೆ ರೂಪಿಸಿ ಒಂದು ವಾರದೊಳಗೆ ವರದಿ ಸಲ್ಲಿಸಲು ನಿರ್ದೇಶನ ನೀಡಿದ್ದಾರೆ.

***************

ಬಳ್ಳಾರಿ ಜಿಲ್ಲೆಯಲ್ಲಿ ಅಡುಗೆ ಅನಿಲ ಸಿಲಿಂಡರ್‌ಗಳ ಸರಬರಾಜಿನಲ್ಲಿ ಯಾವುದೇ ಕೊರತೆ ಇಲ್ಲ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ತಿಳಿಸಿದ್ದಾರೆ. ನಗರದಲ್ಲಿ ೨೫ ದಿನಕ್ಕೆ ಗ್ರಾಮೀಣದಲ್ಲಿ ೪೫ ದಿನಕ್ಕೆ ಒಂದು ಸಿಲಿಂಡರನ್ನು ಗ್ರಾಹಕರಿಗೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಗೃಹ ಬಳಕೆಯ ಅನಿಲ ಸರಬರಾಜು ಮತ್ತು ವಿತರಣೆ ಕುರಿತಂತೆ ಸರ್ಕಾರ ನೀಡುವ ಮಾರ್ಗಸೂಚಿಗಳನ್ನು ಅನಿಲ ವಿತರಕ ಕಂಪನಿಯ ಮಾರಾಟಗಾರರು ಪಾಲಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ ಕುಮಾರ ಸೂಚಿಸಿದ್ದಾರೆ. ಜಿಲ್ಲೆಯ ದೈನಂದಿನ ಬೇಡಿಕೆಗೆ ತಕ್ಕಂತೆ ಗೃಹ ಬಳಕೆಯ ಅನಿಲ ಸರಬರಾಜು ಮಾಡಲು ಅಗತ್ಯ ಕ್ರಮ ವಹಿಸಬೇಕು ಎಂದು ಅವರು ನಿರ್ದೇಶನ ನೀಡಿದ್ದಾರೆ. ಕಾಳಸಂತೆಯಲ್ಲಿ ಅಡುಗೆ ಅನಿಲ ಮಾರಾಟ ಮಾಡುವುದು ಕಂಡುಬಂದರೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

***************

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಸಕಾಲ' ಯೋಜನೆಯ ಅನುಷ್ಠಾನದಲ್ಲಿ ಮಾರ್ಚ್ ತಿಂಗಳಿನಲ್ಲಿ ಗಣಿನಾಡು ಬಳ್ಳಾರಿ ಜಿಲ್ಲೆಯು ರಾಜ್ಯದಲ್ಲೇ ಮೊದಲ ಸ್ಥಾನ ಪಡೆದಿದೆ.

ಬಳ್ಳಾರಿ ಜಿಲ್ಲೆಯು ಶೇಕಡ ೯೭.೯೧ ರಷ್ಟು ಅರ್ಜಿಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವ ಮೂಲಕ ಗಮನಾರ್ಹ ಸಾಧನೆ ಮಾಡಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ.ತಿಳಿಸಿದ್ದಾರೆ.

***************

ಛತ್ತೀಸ್‌ಗಢದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟದ ಏಳನೇ ದಿನವಾದ ಇಂದು ಕರ್ನಾಟಕ ಪದಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿ ಮುಂದುವರೆದಿದೆ. ಕರ್ನಾಟಕ ೨೧ ಚಿನ್ನ, ೮ ಬೆಳ್ಳಿ, ೭ ಕಂಚಿನ ಪದಕದೊಂದಿಗೆ ಒಟ್ಟು ೩೬ ಪದಕ ಗಳಿಸುವ ಮೂಲಕ ಪಾರಮ್ಯ ಮೆರೆದಿದೆ.

ಒಡಿಶಾ ಎರಡನೇ ಸ್ಥಾನದಲ್ಲಿ ಮತ್ತು ಅರುಣಾಚಲ ಪ್ರದೇಶ ಮೂರನೇ ಸ್ಥಾನದಲ್ಲಿದೆ. ಅಥ್ಲೆಟಿಕ್ಸ್ ಸ್ಪರ್ಧೆಗಳಲ್ಲಿ, ಮಹಿಳೆಯರ ವಿಭಾಗದಲ್ಲಿ ಕರ್ನಾಟಕದ ರಿತುಶ್ರೀ ೪೦೦ ಮೀಟರ್ ಓಟದಲ್ಲಿ ಚಿನ್ನದ ಪದಕ ಪಡೆದುಕೊಂಡಿದ್ದಾರೆ. ಸುರ್ಗುಜಾದಲ್ಲಿ ನಡೆದ ಕುಸ್ತಿ ಸ್ಪರ್ಧೆಗಳಲ್ಲಿ, ಕರ್ನಾಟಕದ ಪ್ರಿನ್ಸಿತಾ ಸಿದ್ಧಿ ೬೮ ಕೆಜಿ ವಿಭಾಗದಲ್ಲಿ ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ.

*******ಮುಕ್ತಾಯ********